**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)ನಿಯಮ 330ರಡಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ**

**ಪ್ರಶ್ನೆ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ, ಪ್ರಸ್ತುತ ವರ್ಷದಲ್ಲಿ ಪ್ರವಾಹ ಮತ್ತು ಹವಾಮಾನ ವೈಪರೀತ್ಯದಿಂದಾಗಿ ಕಾಳು ಮೆಣಸು ಮತ್ತು ತೆಂಗು ಬೆಳೆಗೆ ದೊಡ್ಡ ಪ್ರಮಾಣದಲ್ಲಿ ಹಾನಿಯಾಗಿದ್ದು, ತೋಟಗಾರಿಕಾ ಬೆಳೆಗಾರರು ಆರ್ಥಿಕವಾಗಿ ಅತೀವ ನಷ್ಟಕ್ಕೆ ಒಳಗಾಗಿದ್ದಾರೆ. ಜಿಲ್ಲೆಯಲ್ಲಿ ಆಗಿರುವ ಕಾಳು ಮೆಣಸು ಮತ್ತು ತೆಂಗು ಬೆಳೆ ಹಾನಿಗೆ ಸರ್ಕಾರ ಇದುವರೆಗೆ ಸೂಕ್ತ ಹಾಗೂ ಅರ್ಹ ಮೊತ್ತದ ಪರಿಹಾರ ವಿತರಿಸಿಲ್ಲ.

ಜಿಲ್ಲೆಯಲ್ಲಿ ಕಾಳು ಮೆಣಸು ಮತ್ತು ತೆಂಗು ಬೆಳೆ ಹಾನಿಗೆ ಸೂಕ್ತ ಹಾಗೂ ಅರ್ಹ ಮೊತ್ತದ ಪರಿಹಾರ ವಿತರಿಸಿಲ್ಲದಿರುವುದು ಹಾಗೂ ತೆಂಗಿನ ತೋಟಗಳ ಪುನಶ್ಚೇತನಕ್ಕೆ ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತೆಂಗು ಬೆಳೆಯನ್ನು ಅಂದಾಜು 27602 ಹೆ. ಪ್ರದೇಶದಲ್ಲಿ ಹಾಗೂ ಕಾಳುಮೆಣಸು ಬೆಳೆಯನ್ನು 38011 ಹೆ. ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, ಪ್ರಸ್ತುತ ಸಾಲಿನಲ್ಲಿ ಅತಿವೃಷ್ಟಿಯಿಂದಾಗಿ 0.448 ಹೆ ಕಾಳುಮೆಣಸು ಹಾಗೂ 1.092 ಹೆ ತೆಂಗು ಬೆಳೆ ಹಾನಿಯಾಗಿರುವುದಾಗಿ ವರದಿಯಾಗಿರುತ್ತದೆ.

ಜಿಲ್ಲೆಯಲ್ಲಿ ಕೊಳೆ ರೋಗದಿಂದ 367 ಹೆ. ಮತ್ತು ಶೀಘ್ರ ಸೊರಗು ರೋಗದಿಂದ 30 ಹೆ. ಪ್ರದೇಶದಲ್ಲಿ ಕಾಳು ಮೆಣಸು ಬೆಳೆಯು ಹಾನಿಯಾಗಿರುತ್ತದೆ.

ಹಾನಿಯಾದ ತೋಟಗಾರಿಕೆ ಬೆಳೆಗಳಿಗೆ ಪ್ರತಿ ರೈತರಿಗೆ 2.00 ಹೆಕ್ಟೇರ್ ವರೆಗೆ ಬಹುವಾರ್ಷಿಕ ಬೆಳೆಗಳಿಗೆ ಕೇಂದ್ರ ಸರ್ಕಾರದ NDRF/SDRF ಮಾರ್ಗಸೂಚಿಯನ್ವಯ ರೂ. 22500 ಪ್ರತಿ ಹೆಕ್ಟೇರ್ ಗೆ ಮತ್ತು ರಾಜ್ಯ ಸರ್ಕಾರದಿಂದ ಹೆಚ್ಚಿಸಿರುವ Input subsidy ಪ್ರತಿ ಹೆಕ್ಟೇರ್ ಗೆ ರೂ. 8500 ಎಲ್ಲಾ ಸೇರಿ ಒಟ್ಟು ಪ್ರತಿ ಹೆಕ್ಟೇರ್ ಗೆ ರೂ. 31000 ಪರಿಹಾರವನ್ನು ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗುತ್ತದೆ.

ಇಲ್ಲಿಯವರೆಗೂ ಕೃಷಿ ಹಾಗೂ ತೋಟಗಾರಿಕೆ ಬೆಳೆಹಾನಿಯಾದ ಒಟ್ಟು 244 ರೈತರಿಗೆ ರೂ. 16.63 ಲಕ್ಷಗಳನ್ನು ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗಿದೆ.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಮಗ್ರ ಪೋಷಕಾಂಶ ನಿರ್ವಹಣೆ/ ಸಮಗ್ರ ರೋಗ ನಿರ್ವಹಣೆ ಕಾಂಪೋನೆಂಟ್ ನಡಿ ಕಾಳುಮೆಣಸು ಮತ್ತು ತೆಂಗು ಸೇರಿದಂತೆ ಎಲ್ಲಾ ತೋಟಗಾರಿಕೆ ಬೆಳೆಗಳಿಗೆ ಸಸ್ಯ ಸಂರಕ್ಷಣಾ ಔಷಧಿಗಳ ಖರೀದಿಗೆ ಶೇ. 30ರ ಸಹಾಯಧನ ಸೌಲಭ್ಯವನ್ನು ನೀಡಲಾಗುತ್ತಿದ್ದು, ಈವರೆಗೆ ರೂ. 9.23813 ಲಕ್ಷಗಳ ಸಹಾಯಧನವನ್ನು 485 ರೈತರಿಗೆ ಪಾವತಿಸಲಾಗಿರುತ್ತದೆ.

ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಯನ್ನು ಪರಿಗಣಿಸಲಾಗಿದ್ದು, ಈ ಜಿಲ್ಲೆಯಲ್ಲಿ ಕರಿಮೆಣಸು ಬೆಳೆಗೆ 2023-24ನೇ ಸಾಲಿನಲ್ಲಿ 50064 ರೈತ ಪ್ರಕರಣಗಳನ್ನು ನೋಂದಾಯಿಸಲಾಗಿದ್ದು, ಈವರೆವಿಗೆ 9.66 ಕೋಟಿ ವಿಮಾ ಮೊತ್ತವನ್ನು ಪಾವತಿ ಮಾಡಲಾಗಿದೆ. 2024-25ನೇ ಸಾಲಿನಲ್ಲಿ 46663 ರೈತ ಪ್ರಕರಣಗಳನ್ನು ನೋಂದಾಯಿಸಲಾಗಿದ್ದು, ಈವರೆವಿಗೆ 11.79 ಕೋಟಿ ವಿಮಾ ಮೊತ್ತವನ್ನು ಪಾವತಿ ಮಾಡಲಾಗಿದೆ.

ತೆಂಗು ಅಭಿವೃದ್ಧಿ ಮಂಡಳಿ ವತಿಯಿಂದ ತೆಂಗಿನ ತೋಟಗಳ ಪುನ:ಶ್ಚೇತನ, ಮರುನಾಟಿ ಮತ್ತು ನಿರ್ವಹಣೆ ಕಾರ್ಯಕ್ರಮ; ತೆಂಗು ಅಭಿವೃದ್ಧಿ ಮಂಡಳಿ ವತಿಯಿಂದ ತೆಂಗಿನ ತೋಟಗಳ ಪುನ:ಶ್ಚೇತನ, ಮರುನಾಟಿ ಮತ್ತು ನಿರ್ವಹಣೆಗಾಗಿ ಪ್ರತಿ

ಫಲಾನುಭವಿಗೆ ಒಂದು ಹೆಕ್ಟೇರ್ ವರೆಗೆ ರೂ. 54,000/- ಗಳನ್ನು ನೀಡಲಾಗುತ್ತಿದೆ. ಮೊದಲನೇ ವರ್ಷ ರೂ.45,250/- ಗಳನ್ನು ಹಾಗೂ ಎರಡನೇ ವರ್ಷದ ನಿರ್ವಹಣೆಗೆ ರೂ.8,750/ ಗಳ ಸಹಾಯಧನವನ್ನು ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತೆಂಗಿನ ತೋಟಗಳ ಪುನ:ಶ್ಚೇತನ ನಿರ್ವಹಣೆ ಕಾರ್ಯಕ್ರಮಕ್ಕೆ 29 ಹೆಕ್ಟೇರ್ ಪ್ರದೇಶಕ್ಕೆ 96 ಫಲಾನುಭವಿಗಳಿಗೆ ರೂ. 2.54 ಲಕ್ಷ ಸಹಾಯಧನ ನೀಡಲಾಗಿದೆ. ಬೆಳೆಹಾನಿ ಉಂಟಾದ ಸಂದರ್ಭದಲ್ಲಿ ಪರಿಹಾರ ನೀಡುವ ಕಾರ್ಯಕ್ರಮ ತೋಟಗಾರಿಕೆ ಇಲಾಖೆಯಲ್ಲಿರುವುದಿಲ್ಲ.

**HORTI 574 HGM 2025**

**(ಎಸ್.ಎಸ್.ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು